**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ. ಸಿ. ನಂ. 92/2020**

**ಚಾ.ಸಾಃ 12, ಫ್ರಾ.ಸಾಃ 06**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ಸಾವಿತ್ರಿ ನಾಯ್ಕ |
| ಗಂಡನ ಹೆಸರು | ಆನಂದು ನಾಯ್ಕ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಕುಮಟಾ ಪೋಲೀಸ್ ಠಾಣೆ |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 10-10-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಅಗಸ್ಟ-2018 ರಿಂದ ಮೇ-2022 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ **22-07-2019** ರಂದು ಈ ಕೇಸಿನ ಕಡತವನ್ನು ಚಾಸಾ-11 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದುದಾರರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆ ತಯಾರಿಸಿ ಫೋಟೋ ತೆಗೆಸಿರುತ್ತೇನೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. 3 ಫೋಟೋಗಳನ್ನು ನಿಪಿ-2 ರಿಂದ 4 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ-6 ಮತ್ತು 7 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 31-07-2020 ರಂದು ಸಂಜೆ 04-00 ಗಂಟೆ ಸಮಯಕ್ಕೆ ಹೊನ್ನಾವರ ಠಾಣೆಯ ಸಿಪಿಐ ಚಾಸಾ-10 ರವರು 2 ಜನ ಆರೋಪಿತರನ್ನು ಹಿಡಿದು ವಿಚಾರಿಸಿದಾಗ ಅವರು ಈ ಪ್ರಕರಣದಲ್ಲಿಯೂ ಸಹ ಕಳ್ಳತನ ಮಾಡಿರುವುದಾಗಿ ಸದರಿ ಪ್ರಕರಣದಲ್ಲಿ ಸ್ವ ಇಚ್ಛಾ ಹೇಳಿಕೆ ನೀಡಿರುತ್ತಾರೆ.

ದಿನಾಂಕ 04-08-2020 ರಂದು ಚಾಸಾ-1, 6 ಮತ್ತು 7 ರವರ ಮರು ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 05-11-2020 ರಂದು ಚಾಸಾ-8 ಮತ್ತು 9 ರವರ ಹೇಳಿಕೆ ಪಡೆದಿರುತ್ತೇನೆ ಮತ್ತು ಅವರಿಂದ ಕಲಂ 65-ಬಿ ಪ್ರಮಾಣಪತ್ರ ಪಡೆದಿರುತ್ತೇನೆ.

ಈ ಪ್ರಕರಣದ ಸಂಪೂರ್ಣ ತನಿಖೆಯು ಠಾಣಾ ಮೊಕದ್ದಮೆ 67/2020 ರಲ್ಲಿ ಮುಕ್ತಾಯಗೊಂಡಿದ್ದರಿಂದ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ</u>**

ಸ್ಥಳಕ್ಕೆ ಹೋದ ನಂತರ ಪಂಚರನ್ನು ಸ್ಥಳಕ್ಕೆ ಬರಮಾಡಿಕೊಂಡಿರುತ್ತೇನೆ. ಅವರಿಗೆ ನೋಟೀಸು ನೀಡಿಲ್ಲ, ಮೌಖಿಕವಾಗಿ ಕರೆಸಿಕೊಂಡಿರುತ್ತೇನೆ. ಸ್ಥಳದಲ್ಲಿ ಮುರಿದಿದ್ದ ಬೀಗದ ತಟ್ಟೆಯನ್ನು ಪರಿಶೀಲಿಸಿದ್ದು ಸಿಗಲಿಲ್ಲ. ಆರೋಪಿತರು ಮುರಿದಿದ್ದ ಹುಂಡಿಯನ್ನು ಅಮಾನತ್ತುಪಡಿಸಿಕೊಂಡಿಲ್ಲ. ಕೇವಲ ಫೋಟೋ ತೆಗೆಸಿದ್ದೇನೆ. ಅದು ದೇವಸ್ಥಾನದ ಹಿಂಭಾಗದಲ್ಲಿ ಬಿದ್ದಿತ್ತು. ಪಂಚನಾಮೆಯನ್ನು ಚಾಸಾ–9 ರವರ ಮೂಲಕ ಬರೆಸಿರುತ್ತೇನೆ. ಪಂಚನಾಮೆ ಬರೆಯಲು ನಾನೇ ಮಾಹಿತಿ ನೀಡಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಶ್ವಾನದಳದವರನ್ನು ಕರೆಸಿರಲಿಲ್ಲ. ನಾನು ಸ್ಥಳಕ್ಕೆ ಹೋಗಿ ಯಾವುದೇ ಪಂಚನಾಮೆ ಮಾಡಿಲ್ಲ, ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ.ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಮರು ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಸರಿಯಾದ ರೀತಿಯಲ್ಲಿ ತನಿಖೆ ಮಾಡದೇ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**